# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 709 |
| 2 | ಸದಸ್ಯರ ಹೆಸರು | : | ಶ್ರೀ ಎಂ. ನಾರಾಯಣಸ್ವಾಮಿ |
| 3 | ಉತ್ತರಿಸುವ ದಿನಾಂಕ | : | 12-03-2020 |
| 4 | ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಯವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕೆ.ಆರ್‌ಪುರ ವಿಧಾನಸಭಾ ಕ್ಷೇತ್ರದ ಭಟ್ಟರಹಳ್ಳಿ-ಟಿ.ಸಿ.ಪಾಳ್ಯ ರಸ್ತೆ ವಿಸ್ತರಣೆಗೆ ಸ್ವಾಧೀನಪಡಿಸಕೊಳ್ಳದ ಕಟ್ಟಡಗಳು ಹಾಗೂ ಒಂದು ಮಹಡಿಯನ್ನು ಮೂರು ಮಹಡಿ ಕಟ್ಟಡವೆಂದು ತೋರಿಸಿ ಕೆಲವು ರಿಯಲ್ ಎಸ್ಟೇಟ್ ಮಾಫಿಯಾಗಳು 5.65 ಲಕ್ಷ ಚದರಡಿಯಷ್ಟು ಅಭಿವೃದ್ಧಿ ಹಕ್ಕು ಪತ್ರ (ಟಿ.ಡಿ.ಆರ್.ಸಿ) ನೀಡಿ ಸರ್ಕಾರಕ್ಕೆ ಭಾರಿ ನಷ್ಟ ಉಂಟು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಕೆ.ಆರ್.ಪುರ ವಿಧಾನಸಭಾ ಕ್ಷೇತ್ರದ ಭಟ್ಟರಹಳ್ಳಿ-ಟಿಸಿ ಪಾಳ್ಯ ರಸ್ತೆ ಅಗಲೀಕರಣಕ್ಕೆ ಸಂಬಂಧಪಟ್ಟಂತೆ ಸರ್ವೆ ನಂ. 132, ಕೌದೇನಹಳ್ಳಿ ಗ್ರಾಮ ಇಲ್ಲಿ 294784.08 ಚದರ ಅಡಿ ವಿಸ್ತೀರ್ಣಕ್ಕೆ ಡಿ.ಆರ್.ಸಿ.ಯನ್ನು ವಿತರಿಸಲಾಗಿದ್ದು, ಸದರಿ ಕಡತವು ಎ.ಸಿ.ಬಿ.ಯಲ್ಲಿ ವಿಚಾರಣಾ ಹಂತದಲ್ಲಿರುತ್ತದೆ. |
| ಆ | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಮಹದೇವಪುರ ವಲಯದ ಟಿ.ಡಿ.ಆರ್.ಸಿ ಅಧಿಕಾರಿಯಾದ ಸಹಾಯಕ ಕಾರ್ಯಪಾಲಕ ಇಂಜಿನೀಯರ್, ಸಹಾಯಕ ಇಂಜಿನೀಯರ್, ಕಂದಾಯ ಅಧಿಕಾರಿ, ಕಂದಾಯ ನಿರೀಕ್ಷಕರುಗಳ ಮೇಲೆ ದೋಷಾರೋಪ ಪಟ್ಟಿ ಸಲ್ಲಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಮಹದೇವಪುರ ವಲಯದ ಟಿ.ಡಿ.ಆರ್.ಸಿ ಪ್ರಕರಣವನ್ನು ಭ್ರಷ್ಟಾಚಾರ ನಿಗ್ರಹ ಧಳದಿಂದ ತನಿಖೆ ನಡೆಸಲಾಗುತ್ತಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಬಿ.ಬಿ.ಎಂ.ಪಿ.ಯ ಸಹಾಯಕ ಕಾರ್ಯಪಾಲಕ ಇಂಜಿನೀಯರ್ / ಸಹಾಯಕ ಇಂಜಿನೀಯರ್, ಕಂದಾಯ ಅಧಿಕಾರಿ ಹಾಗೂ ಸಹಾಯಕ ಕಂದಾಯ ಅಧಿಕಾರಿ ರವರುಗಳಿಗೆ ಸಂಬಂಧಿಸಿದಂತೆ ಅಭಿಯೋಜನ ಮಂಜೂರಾತಿ ಆದೇಶವನ್ನು ಆಯುಕ್ತರು, ಬಿ.ಬಿ.ಎಂ.ಪಿ. ಇವರು ಭ್ರಷ್ಟಾಚಾರ ನಿಗ್ರಹ ದಳಕ್ಕೆ ಸಲ್ಲಿಸಿರುತ್ತಾರೆ. |
| ಇ | ಈ ಪ್ರಕರಣದಲ್ಲಿ ಟಿಡಿಆರ್‌ಸಿ ವಂಚನೆಗೆ ಸಂಬಂಧಿಸಿದ ಆರೋಪಿ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು? | ಮುಂದುವರೆದು, ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಕೆಲವೊಂದು ಸೇವೆಯಲ್ಲಿರುವ ಮತ್ತು ನಿವೃತ್ತ ಅಧಿಕಾರಿಗಳ ವಿರುದ್ಧ ತನಿಖೆ ಕೈಗೊಳ್ಳುವ ಬಗ್ಗೆ ಎಸಿಬಿಯಿಂದ ಅನುಮತಿ ಕೋರಿ ಸರ್ಕಾರಕ್ಕೆ ಪತ್ರ ಬಂದಿದ್ದು, ಅನುಮತಿ ನೀಡುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |

**ಸಂಖ್ಯೆ: ನಅಇ 81 ಎಂಎನ್‌ಯು 2020**

(ಬಿ.ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ